## 71. ಭವಿಷ್ಯದ ಕರ್ನಾಟಕ ಶೃಂಗಸಭೆ–2020ರಲ್ಲಿ

ಕೋವಿಡ್, ನೆರೆ ಸೇರಿ ಹಲವು ಸವಾಲುಗಳ ನಡುವೆಯೂ ರಾಜ್ಯದ ಜಿಡಿಪಿ ಸುಸ್ಥಿರವಾಗಿ ಬೆಳೆಯುತ್ತಿದ್ದು, ಮುಂದಿನ ಐದು ವರ್ಷಗಳಲ್ಲಿ ರೂ.35 ಲಕ್ಷ ಕೋಟಿ ತಲುಪುವ ಸಾಧ್ಯತೆ ಇದೆ. ಈ ನಿಟ್ಟಿನಲ್ಲಿ ಸರ್ವಪ್ರಯತ್ನ ನಡೆದಿದೆ ಎಂದು ಉಪ ಮುಖ್ಯಮಂತ್ರಿ ಸಿ.ಎನ್.ಅಶ್ವತ್ಥನಾರಾಯಣ ಹೇಳಿದರು.

ಸ್ಪೇರ್ ಟ್ರಾವೆಲ್ ಮೀಡಿಯಾ ಮತ್ತು ಎಕ್ಸಿಬಿಷನ್ ಸಂಸ್ಥೆ ಆಯೋಜಿಸಿದ್ದ 'ಭವಿಷ್ಯದ ಕರ್ನಾಟಕ ಶೃಂಗಸಭೆ–2020'ರ ಆನ್‌ಲೈನ್‌ನಲ್ಲಿ ಮುಖ್ಯ ಭಾಷಣ ಮಾಡಿದ ಅವರು 'ಸದ್ಯ ರಾಜ್ಯವು ರೂ.18 ಲಕ್ಷ ಕೋಟಿ ಜಿಡಿಪಿ ಹೊಂದಿದೆ. ಐದು ವರ್ಷಗಳಲ್ಲಿ ಈ ಮೊತ್ತ ರೂ.35 ಲಕ್ಷ ಕೋಟಿ ದಾಟಲಿದೆ. ನಂತರದ ಐದು ವರ್ಷಗಳಲ್ಲಿ ರೂ.75 ಲಕ್ಷ ಕೋಟಿ ಹೊಂದುವ ಗುರಿ ಇದೆ'. ಆರ್ಥಿಕತೆಗೆ ಬೆನ್ನೆಲುಬಾಗಿರುವ ಕೃಷಿ, ಐಟಿ–ಬಿಟಿ, ಕೈಗಾರಿಕೆ, ಉತ್ಪಾದನೆ ಹಾಗೂ ಸೇವಾ ವಲಯಗಳಿಗೆ ಮತ್ತಷ್ಟು ಶಕ್ತಿ ತುಂಬಲು ಸರ್ಕಾರ ವಿವಿಧ ಕ್ರಮ ಕೈಗೊಂಡಿದೆ. ಐದು ವರ್ಷಗಳಲ್ಲಿ ಗುರಿ ಸಾಧನೆಗೆ ಯತ್ನಿಸಲಾಗುತ್ತಿದೆ ಎಂದರು.

ದೇಶದಲ್ಲಿಯೇ ಕೈಗಾರಿಕೆ ಕ್ಷೇತ್ರದಲ್ಲಿ ಅತ್ಯಂತ ಮಾದರಿ ನೀತಿಯನ್ನು ರಾಜ್ಯ ಅನುಸರಿಸುತ್ತಿದ್ದು, ಯಾವುದೇ ಕೈಗಾರಿಕೆಯನ್ನು ಕೇವಲ ಒಂದು ಅರ್ಜಿ ಸಲ್ಲಿಸಿ ಸ್ಥಾಪಿಸಬಹುದು. ಸರ್ಕಾರದ ಅಧೀನದಲ್ಲಿರುವ ಎಲ್ಲ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಏಕಗವಾಕ್ಷಿ ವ್ಯವಸ್ಥೆಯಡಿ ಅನುಮತಿ ಪಡೆದುಕೊಳ್ಳಬಹುದು ಎಂದು ಹೇಳಿದರು.

ಸದ್ಯಕ್ಕೆ ರಾಜ್ಯದಲ್ಲಿ ಕೋವಿಡ್–19 ಸೋಂಕು ನಿಯಂತ್ರಣದಲ್ಲಿದೆ ಎಂದ ಉಪ ಮುಖ್ಯಮಂತ್ರಿ, ಸರ್ಕಾರದ ವಶದಲ್ಲಿರುವ ಕೋವಿಡ್ ಹಾಸಿಗೆಗಳ ಪೈಕಿ ಇನ್ನೂ ಶೇ.30ರಷ್ಟು ಖಾಲಿ ಇವೆ. ಈಗ ಬೇಡಿಕೆಗಿಂತ ನಮ್ಮಲ್ಲಿರುವ ಸೌಲಭ್ಯಗಳೇ ಹೆಚ್ಚಾಗಿವೆ.  ಯಾವುದೇ ಆತಂಕವಿಲ್ಲ. ಜನರು ಧೈರ್ಯವಾಗಿರಬಹುದು ಎಂದರು.

**ಮೈಸೂರು–ಬೀದರ್ ಕಾರಿಡಾರ್:** ಕೈಗಾರಿಕೆ ಮತ್ತು ವಾಣಿಜ್ಯ ಅಭಿವೃದ್ಧಿಗೆ ಬೇಕಾದ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಮುಂದಾಗಿದ್ದು, ಇದಕ್ಕೆ ಪೂರಕವಾಗಿ ಮೈಸೂರು–ಬೀದರ್ ಕೈಗಾರಿಕಾ ಕಾರಿಡಾರ್ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ. ಬೆಂಗಳೂರು–ಚೆನ್ನೈ ಮತ್ತು ಬೆಂಗಳೂರು–ಮುಂಬೈ ಕಾರಿಡಾರ್‌ಗಳಂತೆ ಈ ಕಾರಿಡಾರ್ ಅಭಿವೃದ್ಧಿಪಡಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಹೇಳಿದರು.

ಆಧಾರ: ಕನ್ನಡಪ್ರಭಾ, ದಿನಾಂಕ: 12.08.2020